# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
## ಬಿ.ಟಿ.ಎಂ ಲೇಔಟ್ ಉಪ-ವಿಭಾಗದ ವಾರ್ಡ್ ಸಂಖ್ಯೆ-152 ಎಸ್.ಜಿ.ಪಾಳ್ಯ
## ಕಚೇರಿಯಲ್ಲಿ ದಿನಾಂಕ: 04.12.2021 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

* * * * * *

ದಿನಾಂಕ-04-12-2021ರಂದು ನಡೆಸಲಾದ ವಾರ್ಡ್ ಮಟ್ಟದ ಸಾರ್ವಜನಿಕರ ಕುಂದು ಕೊರತೆಗಳನ್ನು ವಿಚಾರಿಸುವ ನಿಟ್ಟಿನಲ್ಲಿ ಮತ್ತು ಅಭಿವೃದ್ಧಿ ಕಾಮಗಾರಿಗಳನ್ನು ಪರಿಶೀಲಿಸುವ ಸಂಬಂಧ ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲಾಗಿ ಮೊದಲಿಗೆ ಹಾಜರಿದ್ದ ಅಧ್ಯಕ್ಷರಿಗೆ ಸ್ವಾಗತವನ್ನು ಕೋರುತ್ತಾ ಹಾಗೂ ಸಭೆಗೆ ಹಾಜರಾದ ಎಲ್ಲಾ ಇಲಾಖೆಯ ಅಧಿಕಾರಿ ವರ್ಗದವರಿಗೆ ಮತ್ತು ಸ್ಥಳೀಯ ನಾಗರೀಕರಿಗೆ ಸ್ವಾಗತವನ್ನು ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

ಸಭೆಯನ್ನು ಪ್ರಾರಂಭಿಸುತ್ತಾ, ಸದರಿ ವಾರ್ಡ್‌ನ ಎಲ್ಲಾ ಕುಂದುಕೊರತೆಗಳನ್ನು ಇಲಾಖೆವಾರು ಚರ್ಚಿಸಿ ಬಗೆಹರಿಸಿಕೊಳ್ಳಲು ಅಧ್ಯಕ್ಷರು ಸಲಹೆಗಳನ್ನು ನೀಡಿರುತ್ತಾರೆ. ಈ ಕುರಿತಂತೆ ಈ ಕೆಳಕಂಡ ವಿಷಯಗಳನ್ನು ಸಂಕ್ಷಿಪ್ತವಾಗಿ ಚರ್ಚಿಸಿ ಪರಿಹರಿಸುವ ಬಗ್ಗೆ ಕೈಗೊಳ್ಳುವ ಕ್ರಮಗಳ ಬಗ್ಗೆ ಅಧಿಕಾರಿಗಳಿಗೆ ನಿರ್ದೇಶನವನ್ನು ನೀಡಲಾಯಿತು.

ಸಭೆಗೆ ಹಾಜರಿದ್ದ ಅಧಿಕಾರಿ ವರ್ಗ/ ಸದಸ್ಯರು

| ಕ್ರಮ ಸಂ | ಹೆಸರು | ಮೊಬೈಲ್ ಸಂಖ್ಯೆ |
|---|---|---|
| ೦೧ | ಶ್ರೀ.ಎಸ್.ಪ್ರಭಾಕರ್, ಮುಖ್ಯ ಅಭಿಯಂತರರು (ಪೂರ್ವ)ಬಿ.ಬಿ.ಎಂ.ಪಿ. | 9480685379 |
| ೦೨ | ಶ್ರೀ.ಸತೀಶ್.ಡಿ ಸ.ಇಂ-152 ವಾರ್ಡ್ | 9480688152 |
| ೦೩ | ಶ್ರೀ.ಅಜಯ್‌ಕುಮಾರ್ ಕಿರಿಯ ಆರೋಗ್ಯ ಪರಿವೀಕ್ಷಕರು | 9632222304 |
| ೦೪ | ಶ್ರೀ. ಪಿ.ಜ್ಞಾನೇಶ್ ಸ.ಅ ವಿದ್ಯುತ್ ವಿಭಾಗ ಬಿ.ಬಿ.ಎಂ.ಪಿ | 9480688540 |
| ೦೫ | ಶ್ರೀ.ವಿಜಗದೀಶ್ ಎ.ಎಸ್.ಐ ಎಸ್.ಜಿ.ಪಾಳ್ಯ ಪೊಲೀಸ್ ಠಾಣೆ | 8867733318 |
| ೦೬ | ಶ್ರೀ.ಹೋಲಿಯಪ್ಪ ಮಾರ್ಷಲ್ | 8904349926 |
| ೦೭ | ಶ್ರೀ.ವಿ.ಜಗದೀಶ್ ಎ.ಎಸ್.ಐ ಮಡಿವಾಳ ಪೊಲೀಸ್ ಠಾಣೆ | 8867733308 |
| ೦೮ | ಶ್ರೀ.ಕೆ ವೆಂಕಟೇಶ್ ಎ.ಎಸ್.ಐ ಸಂಚಾರಿ ಪೊಲೀಸ್ ಠಾಣೆ ಮೈಕೋ ಲೇಔಟ್ | 9886339044 |
| ೦೯ | ಶ್ರೀಮತಿ.ಆಶಾ ಸ.ಅ ಬೆಸ್ಕಾಂ | 9900724229 |
| ೧೦ | ಶ್ರೀ.ಕೃಷ್ಣ.ಸಿ ಕೆಲಸ ಪರಿವೀಕ್ಷಕರು ಬಿ.ಡ.ಬ್ಲೂ.ಎಸ್.ಎಸ್.ಬಿ | 9845768405 |
| ೧೧ | ಶ್ರೀ ಸೈಯದ್ ನಸರುದ್ದೀನ್ ಸದಸ್ಯರು | 9741518897 |
| ೧೨ | ಶ್ರೀ.ಬಿ.ವಿಶ್ವಕುಮಾರ್ ಸದಸ್ಯರು | 9845371963 |
| ೧೩ | ಶ್ರೀ.ಮುನಿಂದ್ರ ಮೇಲ್ವಿಚಾರಕರು ಘ.ತ್ಯಾ.ನಿ | 9901002067 |
| ೧೪ | ಶ್ರೀ ಪ್ರಭು ವಾಣಿಜ್ಯ ಘನತ್ಯಾಜ್ಯ ಗುತ್ತಿಗೆದಾರರು | 9611559852 |
| ೧೫ | ಶ್ರೀ.ಗಂಗಾದ್ರಿ ಮೇಲ್ವಿಚಾರಕರು ಘ.ತ್ಯಾ.ನಿ | 9980225272 |
| ೧೬ | ಶ್ರೀ.ಎಚ್.ಲೋಕೇಶ್ ಸದಸ್ಯರು | 9448579144 |
| ೧೭ | ಶ್ರೀ.ಬಿ.ಟಿ.ಕೃಷ್ಣಮೂರ್ತಿ ಸದಸ್ಯರು | 9886339044 |
| ೧೮ | ಶ್ರೀಮತಿ.ಭೂದೇವಿ ಕೆಲಸ ಪರಿವೀಕ್ಷಕರು ತೋಟಗಾರಿಕೆ ಇಲಾಖೆ ದಕ್ಷಿಣ | 9538975386 |
| ೧೯ | ಶ್ರೀ ಮಂಜುನಾಥ ಪಿ. ಮೇಲ್ವಿಚಾರಕರು ಘ.ತ್ಯಾ.ನಿ | 9740903427 |
| ೨೦ | ಶ್ರೀ ಸಿ.ಎಲ್.ನರಸಿಂಹ ಎ.ಎಸ್.ಐ ಮಡಿವಾಳ ಪೊಲೀಸ್ ಠಾಣೆ | 9341790987 |

1) ಮಾನ್ಯ ನೋಡಲ್ ಅಧಿಕಾರಿಗಳು ಸಭೆಯನ್ನು ಪ್ರಾರಂಭಿಸುತ್ತಾ, ಮೊದಲನೇಯದಾಗಿ ಕಳೆದ ಸಭೆಯಲ್ಲಿ ಪ್ರಸ್ತಾಪವಾಗಿದ್ದ ಬಾಲಾಜಿನಗರ 6ನೇ ಅಡ್ಡರಸ್ತೆಯಲ್ಲಿ ಮ್ಯಾನ್‌ಹೋಲ್ ಕುಸಿದು ಗುಂಡಿಯಾಗಿ ಪರಿವರ್ತನೆಯಾಗಿದ್ದು ಹಾಲಿ ಸುರಿಯುತ್ತಿರುವ ಭಾರಿ ಮಳೆಯಿಂದ ಸದರಿ ಮ್ಯಾನ್ ಹೋಲ್‌ನಲ್ಲಿ ನೀರು ತುಂಬಿರುವುದರಿಂದ ಗುಂಡಿ ಕಾಣದೆ ಸವಾರರು ಸದರಿ ಗುಂಡಿಯಲ್ಲಿ ಬೀಳುವ ಸಂಭವ ಹೆಚ್ಚಾಗಿರುತ್ತದೆ ಕೂಡಲೇ ಸರಿಪಡಿಸಲು ತಿಳಿಸಿದ್ದರು. ಆದರೂ ಸಹ ಕುಸಿದು ಬಿದ್ದ ಮ್ಯಾನ್‌ಹೋಲ್‌ನ್ನು ದುರಸ್ಥಿ ಪಡಿಸದ ಕಾರಣ ವಿಷಾದ ವ್ಯಕ್ತಪಡಿಸುತ್ತಾ ಮುಂದಿನ ಸಭೆಯೊಳಗಾಗಿ ಪ್ರಸ್ತಾಪಿತ ಮ್ಯಾನ್‌ಹೋಲ್‌ನ್ನು ಬೆಂಗಳೂರು ನೀರು ಸರಬರಾಜು ಮಂಡಳಿಯ ಕೆಲಸ ಪರಿವೀಕ್ಷಕರಾದ ಶ್ರೀ ಕೃಷ್ಣವರರು ಬರುವ ವಾರದೊಳಗಾಗಿ ಮ್ಯಾನ್‌ಹೋಲ್‌ನ್ನು ದುರಸ್ಥಿಪಡಿಸಲು ಸೂಚಿಸಿದರು.

2) ಮಾನ್ಯ ನೋಡಲ್ ಅಧಿಕಾರಿಗಳು ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿನ ರಸ್ತೆಗಳಲ್ಲಿ ಘನ ತ್ಯಾಜ್ಯವನ್ನು ಇತರೆ ಅವಶೇಷಗಳು ಹಾಗೆಯೇ ಬಿಸಾಡಿದ್ದು, ಸಮರ್ಪಕವಾಗಿ ವಿಲೇವಾರಿಯಾಗುತ್ತಿಲ್ಲ ಎಂದು ತಿಳಿಸಿ, ಸಭೆಯಲ್ಲಿ ಹಾಜರಿದ್ದ ಕಿರಿಯ ಆರೋಗ್ಯ ಪರಿವೀಕ್ಷಕರಾದ ಶ್ರೀ ಅಜಯ್‌ಕುಮಾರ್ ರವರಿಗೆ ಈ ಬಗ್ಗೆ ಕೂಡಲೇ ಸೂಕ್ತ ಕ್ರಮಕೈಗೊಳ್ಳಲು ಸೂಚಿಸಿದರು.

3) ಸಭಾಧ್ಯಕ್ಷರು ಮಾತನಾಡಿ, ಮಾರ್ಷಲ್ ರವರಿಗೆ ಮಹಾಮಾರಿ ಕೊರೋನ ರೋಗ ಮೂರನೇ ಅಲೆ ಹರಡದಂತೆ ತಡೆಯಲು ಮುಂಜಾಗ್ರತ ಕ್ರಮವಾಗಿ ವಾರ್ಡ್ ವ್ಯಾಪ್ತಿಯಲ್ಲಿ ಯಾವುದೇ ಸಭೆ, ಸಮಾರಂಭಗಳು ನಡೆದರೆ ತಪಾಸಣೆ ಮಾಡಿ, ಪರವಾನಿಗೆ ಇಲ್ಲದಿದ್ದರೆ ಪರಿಶೀಲಿಸಿ, ಅಂತಹ ಸಮಾರಂಭಗಳನ್ನು ಸ್ಥಗಿತಗೊಳಿಸತಕ್ಕದ್ದು, ಮತ್ತು ಕಡ್ಡಾಯವಾಗಿ ಮಾಸ್ಕ್ ಧರಿಸುವುದು ಸಾಮಾಜಿಕ ಅಂತರ ಕಾಯ್ದುಕೊಳ್ಳಲು ಮಾರ್ಗಸೂಚಿಗಳನ್ನು ಅಳವಡಿಸಿಕೊಳ್ಳ, ಜಾಗೃತಿ ಮೂಡಿಸಬೇಕು ಹಾಗೂ ಮಾಸ್ಕ್ ಧರಿಸದೇ ಇದ್ದವರಿಗೆ ದಂಡ ವಸೂಲಿ ಮಾಡಲು ಸಭೆಯಲ್ಲಿ ಹಾಜರಿದ್ದ ವಾರ್ಡ್ ಸದಸ್ಯರು ರವರಿಗೆ ಸೂಚಿಸಿದರು.

4) ಶ್ರೀ ಜಿನ್‌ಸನ್ ರವರು ದೂರವಾಣಿ ಮುಖೇನ ಮತ್ತೊಮ್ಮೆ ದೂರನ್ನು ಪ್ರಸ್ತಾಪಿಸಿ, ಭುವನಪ್ಪ ಬಡಾವಣೆ ಪ್ರದೇಶ ವ್ಯಾಪ್ತಿಯ ಸಾರ್ವಜನಿಕ ಪ್ರದೇಶದಲ್ಲಿ ಧೂಮಪಾನ ಹಾಗೂ ಇತರೆ ಕಾನೂನು ಬಾಹಿರ ಚಟುವಟಿಗಳು ಮಾಡುತ್ತಿರುವುದು ಹಾಗೂ ತಡ ರಾತ್ರಿಯವರೆಗೂ ಮದ್ಯಪಾನ ಮಾಡುತ್ತಿರುವುದರಿಂದ ಜನವಸತಿ ಪ್ರದೇಶದ ನಿವಾಸಿಗಳಿಗೆ ತೊಂದರೆಯಾಗುತ್ತಿರುವುದು ಕಂಡುಬಂದಿರುವುದರಿಂದ ಕೂಡಲೇ ಇದರ ಬಗ್ಗೆ ಕ್ರಮಕೈಗೊಳ್ಳಲು ಈ ಹಿಂದೆ ನಾನು ಹಾಜರಿದ್ದ ಅನೇಕ ಸಭೆಗಳಲ್ಲಿ ಹಾಗೂ ವಾಟ್ಸ್‌ಪ್ ಮುಖೇನ ಹಲವಾರು ಬಾರಿ ತಿಳಿಸಿದ್ದರೂ ಸಹ ಇದುವರೆಗೂ ಈ ಬಗ್ಗೆ ಯಾವುದೇ ಕ್ರಮಗಳನ್ನು ಜಾರಿಗೊಳಿಸಿರುವುದಿಲ್ಲ ಎಂದು ಹೇಳಿದರು ಇದರಜೊತೆಗೆ ಶ್ರೀ ಸೈಯದ್ ನಸರುದ್ದೀನ್ ರವರು ಮಾತನಾಡಿ ಬಾಲಾಜಿನಗರ 4ನೇ ಎ,ಬಿ ಮತ್ತು ಸಿ ಕ್ರಾಸ್ ರಸ್ತೆಗಳಲ್ಲಿಯೂ ಸಹ ಕಾನೂನು ಬಾಹಿರ ಚಟುವಟಿಗಳು ಮಾಡುತ್ತಿರುವುದು ಹಾಗೂ ತಡ ರಾತ್ರಿಯವರೆಗೂ ಮದ್ಯಪಾನ ಮಾಡುತ್ತಿರುವುದರಿಂದ ಸಾಮಾನ್ಯ ಜನರು ಓಡಾಡದ ರೀತಿ ಅಸಭ್ಯವಾಗಿ ವರ್ತಿಸುತ್ತಿರುವುದು ಕಂಡುಬಂದಿರುತ್ತದೆ ಈ ಬಗ್ಗೆ ಗಂಭಿರವಾಗಿ ಪರಿಗಣಿಸಿ ಸಮಸ್ಯೆಗಳನ್ನು ಬಗೆಹರಿಸಲು ಸಭೆಗೆ ತಿಳಿಸಿದರು. ಈ ಸಂಬಂಧ ಮಾನ್ಯ ನೋಡಲ್ ಅಧಿಕಾರಿಗಳು ಮಾತನಾಡಿ ಸಭೆಯಲ್ಲಿ ಹಾಜರಿದ್ದ ಪೋಲಿಸ್ ಅಧಿಕಾರಿಗಳನ್ನು ಉದ್ದೇಶಿಸಿ ಈ ವಿಷಯದ ಬಗ್ಗೆ ಅತಿ ಗಂಭಿರವಾಗಿ ಪರಿಗಣಿಸಿ, ಮುಂದಿನ ಸಭೆಯಲ್ಲಿ ಈ ದೂರಿನ ಬಗ್ಗೆ ಕೈಗೊಂಡ ಕ್ರಮದ ಬಗ್ಗೆ ವಿವರ ನೀಡಲು ಸೂಚಿಸಿದರು.

5) ಸಭೆಯಲ್ಲಿ ಹಾಜರಿದ್ದ ಶ್ರೀ ಎನ್.ಲೋಕೇಶ್ ರವರು ಮಾತನಾಡಿ ತಾವರೆಕೆರೆ ಮುಖ್ಯರಸ್ತೆಯ ಆಶೀರ್ವಾದ್ ಹೋಟೇಲ್ ಮುಂಭಾಗದಲ್ಲಿರುವ ಮ್ಯಾನ್‌ಹೋಲ್ ರಸ್ತೆ ಮಟ್ಟಕಿಂತ ಕೆಳಭಾಗದಲ್ಲಿದ್ದು, ವಾಹನಸವಾರರಿಗೆ ತೊಂದರೆಯಾಗುತ್ತಿದ್ದು, ರಸ್ತೆ ಅಪಘಾತವಾಗು ಸಂಭವವಿರುವುದರಿಂದ ಕೂಡಲೇ ಅದನ್ನು ರಸ್ತೆ ಮಟಮಟ್ಟಕ್ಕೆ ಎತ್ತರಿಸಲು ಸಭೆಗೆ ತಿಳಿಸಿದರು. ಈ ಬಗ್ಗೆ ಮಾನ್ಯ ನೋಡಲ್ ಅಧಿಕಾರಿಗಳು ಸಭೆಯಲ್ಲಿ ಹಾಜರಿದ್ದ ಬೆಂಗಳೂರು ನೀರು ಸರಬರಾಜು ಇಲಾಖೆಯ ಕೆಲಸ ಪರಿವೀಕ್ಷರನ್ನು ಉದ್ದೇಶಿಸಿ ಕೂಡಲೇ ಸದರಿ ಮ್ಯಾನ್‌ಹೋಲ್‌ನ್ನು ದುರಸ್ಥಿಪಡಿಸಲು ಸೂಚಿಸಿದರು.

6) ಸಭೆಯಲ್ಲಿ ಹಾಜರಿದ್ದ ಶ್ರೀ.ವಿಶ್ವಕುಮಾರ್‌ರವರು ಮಾತನಾಡಿ, ಮಾರುತಿನಗರ 4ನೇ ಎ. ಬಿ ಮತ್ತು ಸಿ ಅಡ್ಡರಸ್ತೆಗಳಲ್ಲಿ ಕಾಬೂಲ್ ಸ್ಟೋನ್ ಕಾಮಗಾರಿ ನಿರ್ಮಿಸಿ ಅದರ ಮಣ್ಣು ಅವಶೇಷ ಮತ್ತು ಇತರೆ ಡೆಬ್ರೀಸ್‌ಗಳ ಹಾಗೆಯೇ ಬಿಟ್ಟಿರುತ್ತಾರೆ ಎಂದು ಸಭೆಗೆ ತಿಳಿಸಿದರು. ಈ ಬಗ್ಗೆ ಮಾನ್ಯ ಸಭಾಧ್ಯಕ್ಷರು, ಶ್ರೀ ಸತೀಶ್. ವಾರ್ಡ್ ಸಹಾಯಕ ಅಭಿಯಂತರರನ್ನು ಉದ್ದೇಶಿಸಿ ಕೂಡಲೇ ತೆರವುಗೊಳಿಸಲು ಸೂಚಿಸಿದರು.

7) ಬಾಲಾಜಿನಗರ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ಮ್ಯಾನ್‌ಹೋಲ್‌ಗಳನ್ನು ಸೂಚಿಗೊಳಿಸಿ ಅದರ ಹೂಳು ರಸ್ತೆಯಲ್ಲಿ ಹಾಗೆಯೇ ಬಿಟ್ಟಿರುತ್ತಾರೆ ಸದರಿ ರಸ್ತೆಗಳ ವಾಹನ ಸಂಚಾರದಿಂದ ಹೂಳು ಎಲ್ಲಾಕಡೆ ಹರಡಿ ದುರ್ವಾಸನೆ ಬರುತ್ತಿದ್ದು, ಅಲ್ಲಿನ ಸಾರ್ವಜನಿಕರು ಮನೆಯಲ್ಲಿ ವಾಸಿಸಲು ತುಂಬ ತೊಂದರೆ ಉಂಟಾಗುತ್ತಿರುತ್ತದೆ ಎಂದು ಶ್ರೀ.ಬಿ.ಟಿ.ಕೃಷ್ಣಮೂರ್ತಿ ಸಭೆಗೆ ತಿಳಿಸಿದರು. ಈ ಬಗ್ಗೆ ಹಾಜರಿದ್ದ ಬೆಂಗಳೂರು ನೀರು ಸರಬರಾಜು ಇಲಾಖೆಯ ಕೆಲಸ ಪರಿವೀಕ್ಷರಾದ ಶ್ರೀ ಕೃಷ್ಣರವರು ಬರುವ ವಾರದೊಳಗೆ ನಮ್ಮ ಇಲಾಖೆವತಿಯಿಂದ ತೆರವುಗೊಳಿಸುವುದಾಗಿ ತಿಳಿಸಿದರು.

8) ಕ್ರೈಸ್ಟ್ ಕಾಲೇಜು ಹಿಂಭಾಗದ ಗೇಟ್ ಮತ್ತು ತಾವರೆಕೆರೆ ಪಾರ್ಕ್ ರಸ್ತೆಯಲ್ಲಿ ವಾಹನ ಸಂಚಾರ ದಟ್ಟಣೆ ಹೆಚ್ಚಾಗಿರುವುದರಿಂದ ಸದರಿ ರಸ್ತೆಗಳಲ್ಲಿ ಶಾಲಾ ಮಕ್ಕಳು ಮತ್ತು ಸಾರ್ವಜನಿಕರು ಸುಗಮವಾಗಿ ಓಡಾಡಲು ತುಂಬ ತೊಂದರೆಯಾಗುತ್ತಿರುವುದರಿಂದ ವಾಹನ ಸಂಚಾರದ ದಟ್ಟಣೆಯನ್ನು ಕಡಿಮೆಗೊಳಿಸುವ ಕ್ರಮಗಳನ್ನು ಜರುಗಿಸಬೇಕೆಂದು ಶ್ರೀ ಬಿ.ಟಿ.ಕೃಷ್ಣಮೂರ್ತಿರವರು ಸಭೆಯಲ್ಲಿ ತಿಳಿಸಿದರು. ಈ ಬಗ್ಗೆ ಮಾನ್ಯ ನೋಡಲ್ ಅಧಿಕಾರಿಗಳು ಸಭೆಗೆ ಹಾಜರಿದ್ದ ಸಂಬಂಧ ಪಟ್ಟ ಸಂಚಾರಿ ಪೊಲೀಸ್‌ಠಾಣೆ ಅಧಿಕಾರಿಗಳನ್ನು ಉದ್ದೇಶಿಸಿ ಸಮಸ್ಯೆಯನ್ನು ಬಗೆಹರಿಸಲು ಸೂಚಿಸಿದರು.

ಕೊನೆಯದಾಗಿ ಸಭೆ ಅಧ್ಯಕ್ಷರು ಮಾತನಾಡಿ ಈ ಮೇಲ್ಕಂಡ ಎಲ್ಲಾ ವಿಷಯಗಳನ್ನು ಹಾಗೂ ಸಮಸ್ಯೆಗಳನ್ನು ಬರುವ ಮುಂದಿನ ಸಭೆಯೊಳಗಾಗಿ ನಿವಾರಣೆ ಮಾಡಿ ಅನುಪಾಲನೆ ವರದಿಯನ್ನು ಸಂಬಂಧಪಟ್ಟ ಅಧಿಕಾರಿಗಳು ಕಳುಹಿಸಿಕೊಡಬೇಕಾಗಿ ಈ ಮೂಲಕ ಸೂಚಿಸುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಶ್ರೀ. ಸತೀಶ್.ಡಿ)
ಕಾರ್ಯದರ್ಶಿಗಳು
ವಾರ್ಡ್-152 ಎಸ್.ಜಿ.ಪಾಳ್ಯ

(ಶ್ರೀ. ಎಸ್.ಪ್ರಭಾಕರ್)
ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್-152 ಎಸ್.ಜಿ.ಪಾಳ್ಯ

ಪ್ರತಿಯನ್ನು:

1. ಮಾನ್ಯ ಆಯುಕ್ತರು ರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಯೋಜನೆ) ರವರ ಅವಗಾಹನೆಗೆ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಘನತ್ಯಾಜ್ಯ) ರವರ ಅವಗಾಹನೆಗೆ ಸಲ್ಲಿಸಿದೆ.
4. ಜಂಟಿ ಆಯುಕ್ತರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
5. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
6. ಅಧೀಕ್ಷಕ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
7. ಕಾರ್ಯಪಾಲಕ ಅಭಿಯಂತರರು, ಬಿ.ಟಿ.ಎಂ.ಲೇಔಟ್ ವಿಭಾಗರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೋರಮಂಗಲ ಉಪ-ವಿಭಾಗ ರವರಿಗೆ ಮುಂದಿನ ಕ್ರಮಕ್ಕೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಮುಂದಿನ ಕ್ರಮಕ್ಕೆ.
10. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲಮಂಡಳಿ, ಬಿ.ಟಿ.ಎಂ ರವರಿಗೆ ಮುಂದಿನ ಕ್ರಮಕ್ಕೆ
11. ಸಹಾಯಕ ಕಾರ್ಯಪಾಲಕ ಅಭಿಯಂತರರು, ರಸ್ತೆ ಮೂಲಭೂತ ಸೌಕರ್ಯ(ದ) ರವರಿಗೆ ಮುಂದಿನ ಕ್ರಮಕ್ಕೆ.